# National
# Kannada
# 09.01.2025 19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಪ್ರವಾಸಿ ಭಾರತೀಯ ದಿವಸ್: ಭಾರತದ ರಾಯಭಾರಿಗಳಾಗಿ ಅನಿವಾಸಿ ಭಾರತೀಯರು ಸೇವೆ – ಪ್ರಧಾನಿ ನರೇಂದ್ರ ಮೋದಿ
2. ಪ್ರಯಾಗ್‌ರಾಜ್‌ನಲ್ಲಿ ಮಹಾಕುಂಭ ಮೇಳಕ್ಕೆ ಅಂತಿಮ ಸಿದ್ಧತೆ
3. ಗಣರಾಜ್ಯೋತ್ಸವ ಪರೇಡ್: 10 ಸಾವಿರ ವಿಶೇಷ ಅತಿಥಿಗಳಿಗೆ ಆಹ್ವಾನ
4. ಮಲೇಷ್ಯಾ ಓಪನ್ ಬ್ಯಾಡ್ಮಿಂಟನ್: ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಚೀನಾದ ಲೀ ಶಿಫೆಂಗ್ ವಿರುದ್ಧ ಎಚ್.ಎಸ್.ಪ್ರಣಾಯ್‌ಗೆ ಸೋಲು

*****************

ಪ್ರಧಾನಿ ನರೇಂದ್ರ ಮೋದಿ ಒಡಿಶಾದ ಭುವನೇಶ್ವರದಲ್ಲಿಂದು 18ನೇ ಪ್ರವಾಸಿ ಭಾರತೀಯ ದಿವಸ್ ಸಮಾವೇಶವನ್ನು ಔಪಚಾರಿಕವಾಗಿ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಅನಿವಾಸಿ ಭಾರತೀಯರು ಜಗತ್ತಿಗೆ ಭಾರತದ ರಾಯಭಾರಿಗಳಾಗಿ ಸೇವೆ ಸಲ್ಲಿಸುತ್ತಿದ್ದಾರೆ ಎಂದು ಶ್ಲಾಘಿಸಿದರು.

ಜಗತ್ತಿನೆಲ್ಲೆಡೆ ಇರುವ ಅನಿವಾಸಿ ಭಾರತೀಯರು, ಶ್ರೇಷ್ಠ ಸಾಧನೆ ಮಾಡಿದ್ದಾರೆ. ಅವರ ಸಾಧನೆಗಳು ದೇಶವನ್ನು ಹೆಮ್ಮೆ ಪಡುವಂತೆ ಮಾಡಿವೆ ಅವರಿಂದ ಪಡೆದ ಪ್ರೀತಿ ಹಾಗೂ ಗೌರವ ಅವಿಸ್ಮರಣೀಯವಾಗಿದೆ ಎಂದು ಪ್ರಧಾನಿ ಹೇಳಿದರು.

ವಿದೇಶಗಳಲ್ಲಿ ನೆಲೆಸಿರುವ ಅನಿವಾಸಿ ಭಾರತೀಯರಿಂದ ಭಾರತದ ಮೌಲ್ಯಗಳ ಗೌರವ ಹೆಚ್ಚಿದೆ. ಕಳೆದ 10 ವರ್ಷಗಳಲ್ಲಿ ಹಲವಾರು ವಿಶ್ವ ನಾಯಕರನ್ನು ಭೇಟಿಯಾದಾಗ ಅವರೆಲ್ಲರೂ ಭಾರತೀಯ ಅನಿವಾಸಿಗಳನ್ನು ಶ್ಲಾಘಿಸಿದ್ದಾರೆ ಎಂದು ಹೇಳಿದರು.

ಭಾರತದ ಪ್ರಜಾಪ್ರಭುತ್ವದ ನೀತಿಯ ಮಹತ್ವವನ್ನು ವಿವರಿಸಿದ ಪ್ರಧಾನಿ ಭಾರತ ಕೇವಲ ಪ್ರಜಾಪ್ರಭುತ್ವದ ತಾಯಿ ಮಾತ್ರವಲ್ಲ, ಪ್ರಜಾಪ್ರಭುತ್ವವು ನಮ್ಮ ಜೀವನ ವಿಧಾನದಲ್ಲಿ ಬೇರೂರಿದೆ ಎಂದು ಹೇಳಿದರು.

ಪ್ರವಾಸಿ ಭಾರತೀಯ ದಿವಸ್ ಸಮಾವೇಶ ಕೇಂದ್ರ ಸರ್ಕಾರದ ಪ್ರಮುಖ ಉಪಕ್ರಮವಾಗಿದ್ದು, ಇದು ಭಾರತೀಯ ಅನಿವಾಸಿಗಳೊಂದಿಗೆ ಸಂಪರ್ಕ ಸಾಧಿಸಲು, ತೊಡಗಿಸಿಕೊಳ್ಳಲು ಮತ್ತು ಪರಸ್ಪರ ಸಂವಹನ ನಡೆಸಲು ಪ್ರಮುಖ ವೇದಿಕೆಯನ್ನು ಒದಗಿಸುತ್ತದೆ.

ಮೂರು ದಿನಗಳ ಪ್ರವಾಸಿ ಭಾರತೀಯ ದಿವಸ್ ನಿನ್ನೆ ಯುವ ಪ್ರವಾಸಿ ಭಾರತೀಯ ದಿವಸ್ ಉದ್ಘಾಟನೆಯೊಂದಿಗೆ ಪ್ರಾರಂಭಗೊಂಡಿತು. ಈ ವರ್ಷದ ಪ್ರವಾಸಿ ಭಾರತೀಯ ದಿವಸ್ ಸಮಾವೇಶದ ವಿಷಯ 'ವಿಕಸಿತ ಭಾರತಕ್ಕೆ ಭಾರತೀಯ ಅನಿವಾಸಿಗಳ ಕೊಡುಗೆ' ಎಂಬುದಾಗಿದೆ. ಹಲವಾರು ದೇಶಗಳ ಹೆಚ್ಚಿನ ಸಂಖ್ಯೆಯ ಅನಿವಾಸಿ ಭಾರತೀಯರು ಸಮಾವೇಶದಲ್ಲಿ ಭಾಗವಹಿಸುತ್ತಿದ್ದಾರೆ.

ಈ ಸಂದರ್ಭದಲ್ಲಿ ಪ್ರಧಾನಿ ಮೋದಿ ಭಾರತೀಯ ಅನಿವಾಸಿಗಳಿಗಾಗಿ ವಿಶೇಷ ಪ್ರವಾಸಿ ರೈಲು 'ಪ್ರವಾಸಿ ಭಾರತೀಯ ಎಕ್ಸ್‌ಪ್ರೆಸ್'ಗೆ ವರ್ಚುವಲ್ ಮೂಲಕ ಹಸಿರು ನಿಶಾನೆ ತೋರಿಸಿದರು. ಪ್ರವಾಸಿ ತೀರ್ಥ ದರ್ಶನ ಯೋಜನೆಯಡಿ ಚಲಿಸಲಿರುವ ಈ ರೈಲು ದೆಹಲಿಯ ನಿಜಾಮುದ್ದೀನ್ ರೈಲು ನಿಲ್ದಾಣದಿಂದ ಹೊರಡಲಿದ್ದು, 3 ವಾರಗಳ ಕಾಲ ಭಾರತದ ಪ್ರವಾಸೋದ್ಯಮ ಹಾಗೂ ಧಾರ್ಮಿಕ ಪ್ರಾಮುಖ್ಯತೆಯ ಬಹುಸ್ಥಳಗಳಿಗೆ ಪ್ರಯಾಣಿಸಲಿದೆ.

ಧ್ವನಿ: ಪ್ರಧಾನಿ ಮೋದಿ

ಸಮಾರಂಭದಲ್ಲಿ ಮಾತನಾಡಿದ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್, ದೇಶ ವಿಕಸಿತ ಭಾರತದತ್ತ ಪಯಣ ಆರಂಭಿಸಿದೆ. ಜಾಗತಿಕವಾಗಿ ಭಾರತದ ಬಗ್ಗೆ ಗ್ರಹಿಕೆ ಹೆಚ್ಚಿಸುವಲ್ಲಿ ಯುವ ಅನಿವಾಸಿ ಭಾರತೀಯರ ಪಾತ್ರವನ್ನು ದೇಶ ಗುರುತಿಸುತ್ತದೆ ಎಂದು ಹೇಳಿದರು.

ಜಾಗತೀಕರಣದ ಈ ಯುಗದಲ್ಲಿ ಅನಿವಾಸಿ ಭಾರತೀಯರು ಹೆಚ್ಚು ಮಹತ್ವದ ಪಾತ್ರ ವಹಿಸುತ್ತಿದ್ದಾರೆ. ತಂತ್ರಜ್ಞಾನ, ಪ್ರವಾಸೋದ್ಯಮ, ವ್ಯಾಪಾರ ಅಥವಾ ಹೂಡಿಕೆ ಸೇರಿದಂತೆ ಎಲ್ಲ ವಲಯಗಳಲ್ಲಿ ದ್ವಿಮುಖ ಹರಿವುಗಳು ಅಮೂಲ್ಯವಾದವು ಎಂದರು.

ಧ್ವನಿ: ಸಚಿವ ಡಾ. ಎಸ್. ಜೈಶಂಕರ್

*****************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ಒಡಿಶಾದ ಭುವನೇಶ್ವರಕ್ಕೆ ಭೇಟಿ ನೀಡಿದ್ದಾರೆ.

ಬಿಜು ಪಟ್ನಾಯಕ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರನ್ನು, ಒಡಿಶಾ ರಾಜ್ಯಪಾಲ ಹರಿ ಬಾಬು ಕಂಭಂಪತಿ, ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ ಮತ್ತು ಇತರೆ ಗಣ್ಯರು ಆತ್ಮೀಯವಾಗಿ ಸ್ವಾಗತಿಸಿದರು.

ನಾಳೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, 18ನೇ ಪ್ರವಾಸಿ ಭಾರತೀಯ ದಿವಸ್ ಸಮಾವೇಶದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಹಾಗೂ ಪ್ರವಾಸಿ ಭಾರತೀಯ ಸಮ್ಮಾನ್ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

*****************

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ಇದೇ 13ರಂದು ಆರಂಭವಾಗಲಿರುವ ಮಹಾ ಕುಂಭಮೇಳಕ್ಕೆ ಸಕಲ ಸಿದ್ಧತೆಗಳು ಅಂತಿಮ ಹಂತದಲ್ಲಿದೆ.

ಮಹಾ ಕುಂಭಮೇಳದಲ್ಲಿ ಭಾಗವಹಿಸುವ ಭಕ್ತರ ಸುಗಮ ಸಂಚಾರಕ್ಕೆ ಅನುಕೂಲವಾಗುವಂತೆ ಉತ್ತರ ಪ್ರದೇಶ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಎಲೆಕ್ಟ್ರಿಕ್ ಬಸ್‌ಗಳ ವ್ಯವಸ್ಥೆ ಮಾಡಲಿದೆ. 7 ಸಾವಿರ ಗ್ರಾಮೀಣ ಬಸ್‌ಗಳು ಮತ್ತು 350 ಶಟಲ್ ಬಸ್‌ಗಳನ್ನು ನಿಯೋಜಿಸಿ, ಯಾತ್ರಾರ್ಥಿಗಳ ದಟ್ಟಣೆಯನ್ನು ನಿರ್ವಹಿಸಲಿದೆ. ಅಲ್ಲದೇ, ಸೂಕ್ತ ಬಂದೋಬಸ್ತ್‌ಗಾಗಿ ಎಲ್ಲಾ ಅಗತ್ಯ ವ್ಯವಸ್ಥೆ ಮಾಡಲಾಗಿದೆ.

ಇದೇ 13 ರಿಂದ ಫೆಬ್ರವರಿ 26 ರವರೆಗೆ ನಡೆಯಲಿರುವ ಮಹಾ ಕುಂಭಮೇಳಕ್ಕೆ ವಿದೇಶಿಯರು ಸೇರಿದಂತೆ ಸುಮಾರು 45 ಕೋಟಿ ಭಕ್ತರು ಆಗಮಿಸುವ ನಿರೀಕ್ಷೆಯಿದೆ.

*****************

ಈ ವರ್ಷದ ಗಣರಾಜ್ಯೋತ್ಸವದ ಪೆರೇಡ್ ವೀಕ್ಷಿಸಲು ಸುಮಾರು ಹತ್ತು ಸಾವಿರ ವಿಶೇಷ ಅತಿಥಿಗಳನ್ನು ಆಹ್ವಾನಿಸಲಾಗಿದೆ.

ಈ ವಿಶೇಷ ಅತಿಥಿಗಳಲ್ಲಿ ಪಂಚಾಯಿತಿಗಳ ಮುಖ್ಯಸ್ಥರು, ವಿಪತ್ತು ನಿರ್ವಹಣಾ ತಂಡದ ಕಾರ್ಯಕರ್ತರು, ಜಲ ಯೋಧರು, ಕೈಮಗ್ಗ ಮತ್ತು ಕರಕುಶಲ ಕುಶಲಕರ್ಮಿಗಳು, ಮನ್ ಕಿ ಬಾತ್‌ನಲ್ಲಿ ಭಾಗವಹಿಸಿದವರು, ಮೈ ಭಾರತ್ ಸ್ವಯಂಸೇವಕರು, ಈಶಾನ್ಯ ರಾಜ್ಯಗಳ ಅತಿಥಿಗಳು ಮತ್ತು ಅತ್ಯುತ್ತಮ ನವೋದ್ಯಮಗಳು ಸೇರಿದ್ದಾರೆ.

ಆಹ್ವಾನಿತ ಅತಿಥಿಗಳಲ್ಲಿ ಕೆಲವರು ಸ್ವ-ಸಹಾಯ ಗುಂಪುಗಳ ಮೂಲಕ ಆದಾಯ ಮತ್ತು ಉದ್ಯೋಗ ಸೃಷ್ಟಿಯನ್ನು ಖಚಿತಪಡಿಸಿಕೊಳ್ಳಲು ಅತ್ಯುತ್ತಮ ಕೆಲಸಗಳನ್ನು ಮಾಡುತ್ತಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಪ್ಯಾರಾ-ಒಲಿಂಪಿಕ್ ತಂಡದ ಸದಸ್ಯರು, ಚೆಸ್ ಒಲಿಂಪಿಯಾಡ್‌ನ ಪದಕ ವಿಜೇತರು, ಬ್ರಿಡ್ಜ್ ವರ್ಲ್ಡ್ ಗೇಮ್ಸ್‌ನ ಬೆಳ್ಳಿ ಪದಕ ವಿಜೇತರು ಮತ್ತು ಸ್ನೂಕರ್ ವರ್ಲ್ಡ್ ಚಾಂಪಿಯನ್‌ಶಿಪ್ ಚಿನ್ನದ ಪದಕ ವಿಜೇತರನ್ನು ಸಹ ವಿಶೇಷ ಅತಿಥಿಗಳಾಗಿ ಆಹ್ವಾನಿಸಲಾಗಿದೆ. ಈ ಅತಿಥಿಗಳು ರಾಷ್ಟ್ರೀಯ ಯುದ್ಧ ಸ್ಮಾರಕ, ಪ್ರಧಾನಮಂತ್ರಿ ಸಂಗ್ರಹಾಲಯ ಮತ್ತು ದೆಹಲಿಯ ಇತರೆ ಪ್ರಮುಖ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

*****************

ಪ್ರಧಾನಿ ನರೇಂದ್ರ ಮೋದಿಯವರ ಸುಸ್ಥಿರ ಭವಿಷ್ಯದ ದೃಷ್ಟಿಕೋನಕ್ಕೆ ಅನುಗುಣವಾಗಿ, 2030 ರ ವೇಳೆಗೆ ಶೇಖಡ 50 ರಷ್ಟು ಪಳೆಯುಳಿಕೆ ರಹಿತ ಇಂಧನಕ್ಕೆ ಬದಲಾಗುವ ಭಾರತದ ಬದ್ಧತೆಯನ್ನು ಕೇಂದ್ರ ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಪುನರುಚ್ಚರಿಸಿದರು.

ಮುಂಬೈನಲ್ಲಿ ಇಂದು ನಡೆದ ಭಾರತದ ನವೀಕರಿಸಬಹುದಾದ ಇಂಧನ ಕಾರ್ಯಸೂಚಿಯನ್ನು ಮುಂದುವರೆಸುವ ಪ್ರಾದೇಶಿಕ ಕಾರ್ಯಾಗಾರದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ನವೀಕರಿಸಬಹುದಾದ ಇಂಧನ ಮೂಲಗಳನ್ನು ಭಾರತ ಹೇರಳವಾಗಿ ಹೊಂದಿದ್ದು, ತಾಂತ್ರಿಕ ಪ್ರಗತಿಯ ಮೂಲಕ ಹಸಿರು ಇಂಧನ ವಲಯವನ್ನು ಆರ್ಥಿಕವಾಗಿ ಕಾರ್ಯಸಾಧ್ಯವಾಗಿಸುವತ್ತ ಗಮನಹರಿಸಿದೆ ಎಂದರು.

ಹಸಿರು ಇಂಧನದಿಂದ ತಯಾರಿಸಿದ ಉತ್ಪನ್ನಗಳಿಗೆ ಜಾಗತಿಕ ಬೇಡಿಕೆ ಹೆಚ್ಚಾಗುವ ನಿರೀಕ್ಷೆಯಿದೆ ಮತ್ತು ಈ ಬೇಡಿಕೆಯನ್ನು ಪೂರೈಸಲು ಭಾರತವು ತನ್ನ ವಿಶಾಲವಾದ ನವೀಕರಿಸಬಹುದಾದ ಸಂಪನ್ಮೂಲಗಳನ್ನು ಬಳಸಿಕೊಳ್ಳುವ ಗುರಿಯನ್ನು ಹೊಂದಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

*****************

ಇಂಧನ ಆಮದು ಮಾಡಿಕೊಳ್ಳುವ ಬದಲು, ರಫ್ತು ಮಾಡುವ ದೇಶವನ್ನಾಗಿ ಭಾರತವನ್ನು ಪರಿವರ್ತಿಸಬೇಕಿದೆ ಎಂದು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ.

ಮಧ್ಯಪ್ರದೇಶದ ಪಿತಾಂಪುರದಲ್ಲಿರುವ ನ್ಯಾಷನಲ್ ಆಟೋಮೋಟಿವ್ ಟೆಸ್ಟ್ ಟ್ರ್ಯಾಕ್‌ನಲ್ಲಿ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭಾರತ ಪರ್ಯಾಯ ಇಂಧನ ಮೂಲಗಳನ್ನು ನಿರಂತರವಾಗಿ ಉತ್ತೇಜಿಸುತ್ತಿದೆ ಎಂದರು.

ಹೈಡ್ರೋಜನ್-ಭವಿಷ್ಯದ ಇಂಧನ ಎಂದು ಪ್ರತಿಪಾದಿಸಿದ ಅವರು, ಸರ್ಕಾರ ಮತ್ತು ಅನೇಕ ಆಟೋಮೊಬೈಲ್ ಕಂಪನಿಗಳು ಈ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ಹೇಳಿದರು.

ದೇಶದ ಆರ್ಥಿಕ ಬೆಳವಣಿಗೆಯಲ್ಲಿ ಆಟೋಮೊಬೈಲ್ ಉದ್ಯಮದ ಪ್ರಾಮುಖ್ಯತೆಯನ್ನು ಒತ್ತಿ ಹೇಳಿದ ಸಚಿವ ನಿತಿನ್ ಗಡ್ಕರಿ, ಇಂಧನ ವಲಯವು ಇಲ್ಲಿಯವರೆಗೆ 4.5 ಕೋಟಿಗೂ ಹೆಚ್ಚು ಉದ್ಯೋಗಗಳನ್ನು ಸೃಷ್ಟಿಸಿದೆ ಎಂದು ತಿಳಿಸಿದರು.

*****************

ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಭಾರತ ಮತ್ತು ಅಮೆರಿಕ ಒಗ್ಗಟ್ಟಾಗಿವೆ ಎಂದು ಭಾರತಕ್ಕೆ ಅಮೆರಿಕದ ರಾಯಭಾರಿ ಎರಿಕ್ ಗಾರ್ಸೆಟ್ಟಿ ಹೇಳಿದ್ದಾರೆ.

ಮುಂಬೈನಲ್ಲಿ ಇಂದು ನಡೆದ ವಿಚಾರ ಸಂಕಿರಣವನ್ನುದ್ದೇಶಿಸಿ ಮಾತನಾಡಿದ ಅವರು, ಅಪರಾಧಿಗಳ ವಿರುದ್ಧ ನ್ಯಾಯಾಂಗ ಕ್ರಮಗಳನ್ನು ಕೈಗೊಳ್ಳಲು ಎರಡೂ ದೇಶಗಳ ನಡುವೆ ಗುಪ್ತಚರ ಮಾಹಿತಿ ಹಂಚಿಕೆ ಮತ್ತು ಸಹಕಾರದ ಬಗ್ಗೆ ತೃಪ್ತಿ ವ್ಯಕ್ತಪಡಿಸಿದರು.

ಶಾಂತಿಯುತ ಜಗತ್ತನ್ನು ನಿರ್ಮಿಸಲು ರಾಜತಾಂತ್ರಿಕತೆ ಮತ್ತು ಜನರಿಂದ ಜನರ ಸಂಪರ್ಕದ ಮಹತ್ವದ ಬಗ್ಗೆಯೂ ಅವರು ಮಾತನಾಡಿದರು.

ಇದೇ ವೇಳೆ, ಆರ್ಥಿಕ ಕಾರಿಡಾರ್‌ಗಳನ್ನು ನಿರ್ಮಿಸುವ ಅಗತ್ಯವನ್ನು ಒತ್ತಿ ಹೇಳಿದ ಭಾರತ, ಎರಿಕ್ ಗಾರ್ಸೆಟ್ಟಿ, ಭಾರತ-ಮಧ್ಯಪ್ರಾಚ್ಯ-ಯುರೋಪ್ ಆರ್ಥಿಕ ಕಾರಿಡಾರ್, ಜಗತ್ತಿನ ಆರ್ಥಿಕ ವಲಯದಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದು ಅಭಿಪ್ರಾಯಪಟ್ಟರು.

*****************

ಛತ್ತೀಸ್‌ಗಢದ ಸುಕ್ಮಾ ಜಿಲ್ಲೆಯಲ್ಲಿ ಇಂದು ಭದ್ರತಾ ಪಡೆಗಳು ನಡೆಸಿದ ಕಾರ್ಯಾಚರಣೆಯಲ್ಲಿ ಮೂವರು ಮಾವೋವಾದಿಗಳು ಹತರಾಗಿದ್ದಾರೆ.

ಸುಕ್ಮಾ ಮತ್ತು ಬಿಜಾಪುರ ಜಿಲ್ಲೆಗಳ ಗಡಿಯಲ್ಲಿರುವ ಕಾಡಿನಲ್ಲಿ ಜಂಟಿ ಭದ್ರತಾ ಪಡೆಯು ನಕ್ಸಲ್ ವಿರೋಧಿ ಕಾರ್ಯಾಚರಣೆ ನಡೆಸುತ್ತಿರುವಾಗ ಭದ್ರತಾ ಪಡೆಗಳು ಮತ್ತು ಮಾವೋವಾದಿಗಳ ನಡುವೆ ಗುಂಡಿನ ಚಕಮಕಿ ನಡೆದಿದೆ.

ಜಿಲ್ಲಾ ಮೀಸಲು ಪಡೆ, ವಿಶೇಷ ಕಾರ್ಯಪಡೆ ಮತ್ತು ಸಿಆರ್‌ಪಿಎಫ್‌ನ ಕಮಾಂಡೋ ಬೆಟಾಲಿಯನ್ ಫಾರ್ ರೆಸಲ್ಯೂಟ್ ಆಕ್ಷನ್ – ಕೋಬ್ರಾ ಪಡೆಯ ಸಿಬ್ಬಂದಿ ಜಂಟಿ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ. ಕಾರ್ಯಾಚರಣೆ ಮುಂದುವರಿದಿದೆ.

*****************

ಕೌಲಾಲಂಪುರದಲ್ಲಿ ನಡೆಯುತ್ತಿರುವ ಮಲೇಷ್ಯಾ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಪುರುಷರ ಸಿಂಗಲ್ಸ್ ವಿಭಾಗದ ಪ್ರಿ–ಕ್ವಾಟರ್‌ಫೈನಲ್ಸ್ ಪಂದ್ಯದಲ್ಲಿ ಇಂದು ಭಾರತದ ಶಟ್ಲರ್ ಎಚ್.ಎಸ್.ಪ್ರಣಾಯ್, 8-21, 21-15, 21-23 ಸೆಟ್‌ಗಳಿಂದ ಚೀನಾದ ಲೀ ಶಿಫೆಂಗ್ ವಿರುದ್ಧ ಪರಾಭವಗೊಂಡರು.

ಮತ್ತೊಂದೆಡೆ, ಮಹಿಳೆಯ ಡಬಲ್ಸ್ ವಿಭಾಗದ 16ನೇ ಸುತ್ತಿನಲ್ಲಿ ಚೀನಾದ ಜಾನ್ ಶುಕ್ಸಿಯಾನ್ ಮತ್ತು ಜಿಯಾ ಯಿಫಾನ್ ಜೋಡಿ ವಿರುದ್ಧ 21-15, 18-21, 19-21 ಸೆಟ್‌ಗಳಿಂದ ಭಾರತದ ತ್ರೀಸಾ ಜೊಲ್ಲಿ ಮತ್ತು ಗಾಯತ್ರಿ ಗೋಪಿಚಂದ್ ಜೋಡಿಯು ಸೋತಿತು. ಈ ಮೂಲಕ ಪಂದ್ಯಾವಳಿಯಿಂದ ಹೊರಬಿದ್ದಿತು.

*****************

ಚೆನ್ನೈನ ಜವಾಹರ್‌ಲಾಲ್ ನೆಹರು ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರವ ಇಂಡಿಯನ್ ಸೂಪರ್ ಪಂದ್ಯಾವಳಿಯಲ್ಲಿ ಚೆನ್ನೈಯಿನ್ ಫುಟ್ಬಾಲ್ ಕ್ಲಬ್ ಮತ್ತು ಒಡಿಶಾ ತಂಡಗಳು ಮುಖಾಮುಖಿಯಾಗಿದ್ದು, ಪಂದ್ಯ ಪ್ರಗತಿಯಲ್ಲಿದೆ.

*********ಮುಕ್ತಾಯ********